## 26. ಕೃಷಿ ಬಿಲ್ ಪಾಸ್

ರೈತ ಸಂಘಟನೆಗಳು ಮತ್ತು ಪ್ರತಿಪಕ್ಷಗಳ ವಿರೋಧದ ನಡುವೆಯೇ ರಾಜ್ಯ ಸರ್ಕಾರ ಭೂ ಸುಧಾರಣೆ ತಿದ್ದುಪಡಿ ಕಾಯ್ದೆ ಹಾಗೂ ಎಪಿಎಂಸಿ ತಿದ್ದುಪಡಿ ಕಾಯ್ದೆಯನ್ನು ಅಂಗೀಕರಿಸಿದೆ.

ಈ ಎರಡು ಕಾಯ್ದೆಗಳನ್ನು ವಿರೋಧಿಸುತ್ತಿರುವ ರೈತ ಸಂಘಟನೆಗಳು ಈಗಾಗಲೇ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದ್ದು, ರಾಜ್ಯ ಬಂದ್‌ಗೂ ಕರೆ ನೀಡಿವೆ. ಇದು ರೈತರ ಮರಣ ಶಾಸನ ಕರಾಳ ವಿಧೇಯಕ, ಕಾರ್ಪೋರೇಟ್ ಕುಳಗಳಿಗೆ, ಹೌಸಿಂಗ್ ಸೊಸೈಟಿಗಳ ಜೊತೆ ಶಾಮೀಲಾಗಿ ಈ ವಿಧೇಯಕ ತರಲಾಗುತ್ತಿದೆ ಎಂದು ಆರೋಪಿಸಿದ ಕಾಂಗ್ರೆಸ್ ಸದಸ್ಯರು ಮಸೂದೆಯ ಪ್ರತಿಯನ್ನು ಹರಿದು ಹಾಕಿದರಲ್ಲದೇ ಸಭಾತ್ಯಾಗ ಮಾಡಿ ಆಕ್ರೋಶ ವ್ಯಕ್ತಪಡಿಸಿದರು. ಹಿಂದೆಯೇ ಎಪಿಎಂಸಿ ವಿಧೇಯಕ ವಿರೋಧಿಸಿ ಜೆಡಿಎಸ್ ಸದಸ್ಯರು ಸಭಾತ್ಯಾಗ ಮಾಡಿದರು.

**ಪರ–ವಿರೋಧ ಚರ್ಚೆ:–** ವಿಧೇಯಕ ಮಂಡಿಸಿದ ಕಂದಾಯ ಸಚಿವ ಆರ್. ಅಶೋಕ್, ರೈತರಿಗೆ ಇದರಿಂದ ಯಾವುದೇ ಕಾರಣಕ್ಕೂ ತೊಂದರೆಯಾಗದು ಎಂದು ಹೇಳಿದರು. ಆದರೆ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು, ಭೂ ಸುಧಾರಣೆ ತಿದ್ದುಪಡಿ ಕಾಯ್ದೆಗೆ ರೈತರು ಸೇರಿದಂತೆ ಬಹುತೇಕರ ವಿರೋಧವಿದೆ. ಯಾವ ಉದ್ದೇಶಕ್ಕಾಗಿ ಭೂ ಸುಧಾರಣೆಗಳ ಕಾಯ್ದೆಯನ್ನು ದೇವರಾಜ ಅರಸು ಅವರು ತಂದಿದ್ದರೋ ಆ ಮೂಲ ಆಶಯಕ್ಕೆ ಇದು ವಿರುದ್ಧವಾಗಿದೆ. ಕೊರೋನಾ ಸಂದರ್ಭದಲ್ಲಿ ತರಾತುರಿಯಲ್ಲಿ ಸುಗ್ರಿವಾಜ್ಞೆ ತರುವ ಆಗತ್ಯವೇನಿತ್ತು. ಇದರ ಹಿಂದೆ ಬೇರೆಯದೇ ಉದ್ದೇಶವಿದೆ ಎಂದು ಆರೋಪಿಸಿದರು.

**ಜೆಡಿಎಸ್ ಸಹಮತ:** ಅಚ್ಚರಿಯ ಬೆಳವಣಿಗೆಯಲ್ಲಿ ಈ ವಿಧೇಯಕಕ್ಕೆ ಜೆಡಿಎಸ್ ಸಹಮತ ವ್ಯಕ್ತಪಡಿಸಿತು. ಮಾಜಿ ಸಿ.ಎಂ. ಎಚ್.ಡಿ.ಕುಮಾರಸ್ವಾಮಿ ಅವರು ಮಾತನಾಡಿ ಕೊರೋನಾ ಸಂದರ್ಭದಲ್ಲಿ ಸುಗ್ರೀವಾಜ್ಞೆ ತರುವ ಅಗತ್ಯತೆಯ ಬಗ್ಗೆ ಪ್ರಶ್ನಿಸಿದರು. ಜಮೀನು ಖರೀದಿ ಮಿತಿ ಹೆಚ್ಚು ಮಾಡಿರುವುದರಿಂದ ಮತ್ತೆ ಜಮೀನ್ದಾರಿ ಪದ್ಧತಿಯತ್ತ ಹೋಗುವಂತಾಗುತ್ತದೆ ಎಂದು ಹೇಳಿದರಾದರೂ, ಇದರಿಂದ ರೈತರಿಗೆ ಎಷ್ಟು ಅನುಕೂಲವಾಗುತ್ತದೆ ಎಂಬ ಬಗ್ಗೆ ಪರಿಶೀಲನೆ ನಡೆಸಿ ಎಂದು ಸಲಹೆ ನೀಡಿದರು. ಆದರೆ, ಈ ವಿಧೇಯಕಕ್ಕೆ ಜೆಡಿಎಸ್ ಶಾಸಕ ಶಿವಲಿಂಗೇಗೌಡರು ವಿರೋಧ ವ್ಯಕ್ತಪಡಿಸಿದರು.

**ನನ್ನ ಬೆಳೆ ನನ್ನ ಹಕ್ಕು:** ರೈತರು ತಾವು ಬೆಳೆದ ಬೆಳೆಗಳನ್ನು ಎಪಿಎಂಸಿಗಳಲ್ಲಿಯೇ ಮಾರಾಟ ಮಾಡುವ ವ್ಯವಸ್ಥೆ ಜಾರಿಯಲ್ಲಿದೆ.

**ಭೂ ಸುಧಾರಣೆ ಕಾಯ್ದೆ ತಿದ್ದುಪಡಿಯಲ್ಲಿ ಏನಿದೆ:**

- ➢ ಜಮೀನು ಖರೀದಿಸಲು ಕೃಷಿಯೇತರ ಆದಾಯ ರೂ.25 ಲಕ್ಷ ಮೀರಿರಬಾರದು ಎಂಬ ಮಿತಿ ರದ್ದು.
- ➢ ವ್ಯಕ್ತಿ ಅಥವಾ ಐದು ಸದಸ್ಯರ ಕುಟುಂಬಕ್ಕೆ 54 ಎಕರೆ ಹಾಗೂ ಅದಕ್ಕಿಂತ ಹೆಚ್ಚಾಗಿರುವ ಸದಸ್ಯರ ಕುಟುಂಬ ಗರಿಷ್ಠ 108 ಎಕರೆ ಜಮೀನು ಖರೀದಿಸುವ ಅವಕಾಶ ಮುಂದುವರಿಕೆ.
- ➢ ಜಲಾನಯನ ಪ್ರದೇಶ ವ್ಯಾಪ್ತಿಯ ಜಮೀನು ಖರೀದಿಸಿದರೆ ಕೃಷಿ ಉದ್ದೇಶಕ್ಕೆ ಮಾತ್ರ ಬಳಕೆ ಮಾಡಬೇಕು ಎಂಬ ಷರತ್ತು.

ಅತ್ತ ವಿಧಾನ ಸಭೆಯಲ್ಲಿ ಭೂ ಸುಧಾರಣಾ ಮತ್ತು ಎಪಿಎಂಸಿ ತಿದ್ದುಪಡಿ ವಿಧೇಯಕಗಳಿಗೆ ಒಪ್ಪಿಗೆ ಸಿಕ್ಕಿರುವಂತೆಯೇ, ರೈತರ ಆಕ್ರೋಶವು ಹೆಚ್ಚಾಗಿದೆ ಕರ್ನಾಟಕ ಬಂದ್‌ಗೆ ರಾಜ್ಯದ ಜನ ಸಂಪೂರ್ಣ ಸಹಕಾರ ನೀಡಬೇಕು ಎಂದು ಐಕ್ಯ ಹೋರಾಟ ವೇದಿಕೆ ಮುಖಂಡರು ಮನವಿ ಮಾಡಿದ್ದಾರೆ. ಬಂದ್‌ಗೆ ಈಗಾಗಲೇ ಕಬಿನಿ ರೈತ ಹಿತರಕ್ಷಣಾ ಸಮಿತಿ, ರಾಜ್ಯ ಕೃಷಿ ಪಂಪ್ ಸೆಟ್ ಬಳಕೆದಾರರ ಸಂಘ, ಮಹಾದಾಯಿ ನೀರು ಹೋರಾಟ ಸಮಿತಿ, ಕರ್ನಾಟಕ ರಕ್ಷಣಾ ವೇದಿಕೆ ಸೇರಿದಂತೆ ಹಲವು ರೈತ ಸಂಘಟನೆಗಳು ಮತ್ತು ಕನ್ನಡಪರ ಸಂಘಟನೆಗಳು ಬೆಂಬಲ ನೀಡಿವೆ. ಸೆಪ್ಟೆಂಬರ್ 28ರಂದು ಪುರಭವನದ ಎದುರು ವಿವಿಧ ಸಂಘಟನೆಗಳ ಮುಖಂಡರು ಸಮಾಗಮವಾಗಿ ಮೈಸೂರು ಬ್ಯಾಂಕ್ ವೃತ್ತದವರೆಗೂ ಪ್ರತಿಭಟನಾ ಮೆರವಣಿಗೆ ನಡೆಸಲಿದ್ದಾರೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲೂ ಪ್ರತಿಭಟನೆ ನಡೆಯಲಿದೆ.

**ಎಪಿಎಂಸಿ ಕಾಯ್ದೆ ತಿದ್ದುಪಡಿಯಲ್ಲಿ ಏನಿದೆ:**

- ➢ ರೈತರು ಎಪಿಎಂಸಿ ಸೇರಿ ಎಲ್ಲಿ ಬೇಕಾದರೂ ತಮ್ಮ ಉತ್ಪನ್ನ ಮಾರಾಟ ಮಾಡಲು ಅವಕಾಶ.
- ➢ ರೈತರು ಎಪಿಎಂಸಿಯಲ್ಲಿಯೇ ಮಾರಾಟ ಮಾಡದಿದ್ದರೆ, ಅವರ ವಿರುದ್ಧ ಪ್ರಕರಣ ದಾಖಲಿಸುವ

ಅಧಿಕಾರವಿತ್ತು. ಈಗ ಅದನ್ನು ತೆಗೆದು ಹಾಕಲಾಗಿದೆ.

- ನನ್ನ ಬೆಳೆ ನನ್ನ ಹಕ್ಕು ಎಂದು ರೈತರು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡಬಹುದು.

ಆಧಾರ:ಉದಯವಾಣಿ, ದಿನಾಂಕ:27.09.2020